- ಕುಷ್ಟಗಿ ತಾಲ್ಲೂಕು: – 07
- ಯಲಬುರ್ಗಾ ತಾಲ್ಲೂಕು: –10

ಇ) ಕೊಪ್ಪಳ ಜಿಲ್ಲೆಯ ಪದವಿ ಕಾಲೇಜುಗಳಲ್ಲಿ ತಾತ್ಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವವರಿಗೆ ಪ್ರತಿ ತಿಂಗಳು ವೇತನದಿಂದ ವಂಚಿತರಾದವರ ಸಂಖ್ಯೆ ಎಷ್ಟು?

87

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (467)307**
**ಸದಸ್ಯರ ಹೆಸರು : ಶ್ರೀ ಕಿಮ್ಮನೆ ರತ್ನಾಕರ್ (ತೀರ್ಥಹಳ್ಳಿ)**
**ಉತ್ತರಿಸುವ ಸಚಿವರು : (ಶ್ರೀ ಕೆ.ಎಸ್.ಈಶ್ವರಪ್ಪ)**
**: ಇಂಧನ ಸಚಿವರು**

****

ಅ) ಸರ್ಕಾರ ರೈತರಿಗೆ ಉಚಿತ ವಿದ್ಯುತ್ ನೀಡುವುದಾಗಿ ಭರವಸೆ ನೀಡಿರುವುದು ನಿಜವಲ್ಲವೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದ ಮುಂದಿನ ನಿಲುವೇನು?

ಹೌದು ನಿಜ. ರಾಜ್ಯದ ರೈತರ 10 ಹೆಚ್.ಪಿ.ಸಾಮರ್ಥ್ಯದವರೆಗಿನ ನೀರಾವರಿ ಪಂಪುಸೆಟ್ಟುಗಳಿಗೆ ಉಚಿತ ವಿದ್ಯುತ್ ಸೌಲಭ್ಯವನ್ನು ದಿನಾಂಕ 1–8–2008 ರಿಂದ ಜಾರಿಗೊಳಿಸಲಾಗುತ್ತದೆ ಎಂದು ದಿನಾಂಕ 17–7–2008 ರಂದು ಸದನದಲ್ಲಿ ಮಂಡಿಸಲಾದ 2008–09ರ ಆಯವ್ಯಯ ಭಾಷಣದಲ್ಲಿ ಘೋಷಿಸಲಾಗಿದೆ. ಅದರಂತೆ ಸರ್ಕಾರಿ ಆದೇಶ ಹೊರಡಿಸಲು ಕ್ರಮ ತೆಗೆದು ಕೊಳ್ಳಲಾಗುತ್ತಿದೆ.

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (469)308**
**ಸದಸ್ಯರ ಹೆಸರು : ಶ್ರೀ ಕಿಮ್ಮನೆ ರತ್ನಾಕರ್ [ತೀರ್ಥಹಳ್ಳಿ]**
**ಉತ್ತರಿಸುವ ಸಚಿವರು : (ಶ್ರೀ ಅರವಿಂದಲಿಂಬಾವಳಿ)**
**: ಮಾನ್ಯ ಉನ್ನತ ಶಿಕ್ಷಣ ಸಚಿವರು**

ಅ. ಕಳೆದ ಸಾಲಿನಲ್ಲಿ ಮತ್ತು ಪ್ರಸ್ತುತ ಸಾಲಿನಲ್ಲಿ ಪ್ರಾರಂಭಿಸಲಾದ ಪ್ರಥಮ ದರ್ಜೆ(ಪದವಿ) ಕಾಲೇಜುಗಳ ಸಂಖ್ಯೆ ಎಷ್ಟು;

ಕಳೆದ ಸಾಲಿನಲ್ಲಿ ಎಂದರೆ 2007–08ನೇ ಸಾಲಿಗೆ 167 ಹೊಸ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಗಳನ್ನು ಪ್ರಾರಂಭಿಸಲಾಗಿದೆ. ಪ್ರಸ್ತುತ ಸಾಲಿನಲ್ಲಿ ಎಂದರೆ 2008–09ನೇ ಸಾಲಿಗೆ ಯಾವುದೇ ಹೊಸ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಪ್ರಾರಂಭಿಸಿರುವುದಿಲ್ಲ.

ಆ. ಈ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಬಂದಿದೆ.